# ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 51 ಎಲ್‌ಡಬ್ಲ್ಯೂಎ 2017

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: 29-12-2017

## ಸುತ್ತೋಲೆ

ವಿಷಯ: ವಿವಿಧ ಇಲಾಖೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡ ಸಿಬ್ಬಂದಿಗಳಿಗೆ ಕನಿಷ್ಠ ವೇತನ ನೀಡುವ ಬಗ್ಗೆ.

ಉಲ್ಲೇಖ:
1) ಸಿಆಸು ಇಲಾಖೆಯ ಆದೇಶ ಸಂಖ್ಯೆ: ಸಿಆಸುಇ 20 ಸೇಸ್ಥಅ 94, ದಿನಾಂಕ: 21-11-1994.
2) ಕಾರ್ಮಿಕ ಇಲಾಖೆಯ ಸುತ್ತೋಲೆ ಸಂಖ್ಯೆ: ಕಾಇ 173 ಎಲ್‌ಎಂಡಬ್ಲ್ಯೂ 2006, ದಿನಾಂಕ: 30-04-2007.

*********

ಸರ್ಕಾರದ ವಿವಿಧ ಇಲಾಖೆಗಳಲ್ಲಿ ನೇಮಕಗೊಂಡ ದಿನಗೂಲಿಯ ನೌಕರರು ಆಯಾ ಹುದ್ದೆಗಳಲ್ಲಿ, ನಿರ್ವಹಿಸುತ್ತಿರುವ ಕೆಲಸಗಳು/ಕಾರ್ಯಭಾರಗಳು, ಕನಿಷ್ಠ ವೇತನದ ಕಾಯ್ದೆಯಡಿಯಲ್ಲಿ ಬರುವ ಉದ್ಯೋಗಗಳಲ್ಲಿನ ಆಯಾ ಹುದ್ದೆಗಳಿಗೆ ಸರಿಸಮಾನವಾದ ಪಕ್ಷದಲ್ಲಿ, ದಿನಗೂಲಿ ನೌಕರರಿಗೂ ಕೂಡ ಕನಿಷ್ಠ ವೇತನಕ್ಕಿಂತ ಕಡಿಮೆ ಇಲ್ಲದ ವೇತನವನ್ನು ನೀಡುವಂತೆ ಉಲ್ಲೇಖ (1)ರ ಆದೇಶದಲ್ಲಿ ಸೂಚಿಸಲಾಗಿದೆ.

1948ರ ಕನಿಷ್ಠ ವೇತನದ ಕಾಯ್ದೆಯಡಿ ಬರುವ ಉದ್ಯೋಗಗಳಿಗೆ ಕಾಲಕಾಲಕ್ಕೆ ಕಾರ್ಮಿಕ ಇಲಾಖೆಯಿಂದ ಕನಿಷ್ಠ ವೇತನವನ್ನು ಪರಿಷ್ಕರಿಸಿ ಅಧಿಸೂಚನೆಗಳನ್ನು ಹೊರಡಿಸಲಾಗುತ್ತಿದೆ. ಆದರೆ ಕನಿಷ್ಠ ವೇತನದ ಅಧಿಸೂಚನೆಗಳಲ್ಲಿ, ದಿನಗೂಲಿಯನ್ನು ನಿಗದಿಪಡಿಸದೇ ಇರುವ ಕೆಲವು ಹುದ್ದೆಗಳಿಗೆ ಅಂದರೆ ಶೀಘ್ರಲಿಪಿಗಾರರು/ಬೆರಳಚ್ಚುಗಾರರು/ದ್ವಿತೀಯ ದರ್ಜೆ ಸಹಾಯಕರು ಇವರುಗಳಿಗೆ ಸಿನಿಮಾ ಉದ್ದಿಮೆಗಳಿಗೆ ನಿಗದಿಪಡಿಸಿದ ಕನಿಷ್ಠ ವೇತನ ದರಗಳನ್ನು, ಹಾಗೂ ಗ್ರೂಪ್ "ಡಿ" ಹುದ್ದೆಗಳ ನೌಕರರಿಗೆ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳ ಉದ್ದಿಮೆಗಳಿಗೆ ನಿಗದಿಪಡಿಸಿದ ಕನಿಷ್ಠ ದರಗಳನ್ನು ಅನ್ವಯಿಸಿಕೊಂಡು ದಿನಗೂಲಿ ವೇತನವನ್ನು ಮತ್ತು ಜೀವನ ನಿರ್ವಹಣೆಯ ಭತ್ಯೆಯನ್ನು ನೀಡುವ ಬಗ್ಗೆ ಉಲ್ಲೇಖ (2)ರ ಸುತ್ತೋಲೆಯಲ್ಲಿ ತಿಳಿಸಲಾಗಿತ್ತು.

ಪ್ರಸ್ತುತ ಸರ್ಕಾರದ ವಿವಿಧ ಇಲಾಖೆಗಳು, ಸರ್ಕಾರಿ ಸ್ವಾಮ್ಯದ ನಿಗಮಗಳು, ಮಂಡಳಿಗಳು, ವಿಶ್ವವಿದ್ಯಾಲಯಗಳು, ಮಹಾವಿದ್ಯಾಲಯಗಳು, ಶಾಲೆಗಳು, ಸ್ಥಳೀಯ ಸಂಸ್ಥೆಗಳು, ಶಾಸನಬದ್ಧ ಸಂಸ್ಥೆಗಳು, ಸೊಸೈಟಿಗಳು, ಪರಿಷತ್ತುಗಳು, ಯಾವುದೇ ರೀತಿಯ ರಾಜ್ಯ ಸರ್ಕಾರದ ಅಧೀನ / ಸ್ವಾಯತ್ತ ಸಂಸ್ಥೆಗಳಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡು ಕೆಲಸ ನಿರ್ವಹಿಸುತ್ತಿರುವ ಸಿಬ್ಬಂದಿಗಳಿಗೆ ಪಾವತಿಸಬೇಕಾದ ಕನಿಷ್ಠ ವೇತನದ ಕುರಿತು ಹಲವಾರು ಇಲಾಖೆಗಳು ಕಾರ್ಮಿಕ ಇಲಾಖೆಗೆ ಸ್ಪಷ್ಟೀಕರಣಗಳನ್ನು ಕೋರಿರುತ್ತಾರೆ. ಉಲ್ಲೇಖ (1)ರ ಸಿ.ಆ.ಸು. ಇಲಾಖೆಯ ಆದೇಶ ಮತ್ತು ಉಲ್ಲೇಖ (2)ರ ಕಾರ್ಮಿಕ ಇಲಾಖೆಯ ಸುತ್ತೋಲೆಯು 10 ವರ್ಷಗಳಿಗೂ ಮೀರಿದ ಅವಧಿಯದ್ದಾಗಿರುವುದರಿಂದ ಪ್ರಸ್ತುತ ಅವಧಿಯಲ್ಲಿನ ವಿದ್ಯಮಾನಗಳಿಗೆ

ಅನ್ವಯವಾಗುವಂತೆ ಈ ಕೆಳಕಂಡ ಉದ್ದಿಮೆಗಳಿಗೆ ಸಂಬಂಧಿಸಿದಂತೆ, ಹೊರಡಿಸಿರುವ ಕನಿಷ್ಠ ವೇತನ ದರಗಳನ್ನು ಅನ್ವಯಿಸಿಕೊಳ್ಳಲು ಸುತ್ತೋಲೆಯನ್ನು ಹೊರಡಿಸಲಾಗಿದೆ.

1. ಹೊರಗುತ್ತಿಗೆ ಸಿಬ್ಬಂದಿಗಳನ್ನು ಭದ್ರತಾ ಏಜೆನ್ಸಿ ಮುಖಾಂತರ ನೇಮಿಸಿಕೊಂಡಿದ್ದಲ್ಲಿ "ಭದ್ರತಾಏಜೆನ್ಸಿ" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 123 ಎಲ್‌ಡಬ್ಲ್ಯೂಎ 2015, ದಿನಾಂಕ: 29-02-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
2. ಇತರೆ ಮಾನವ ಸಂಪನ್ಮೂಲ ಏಜೆನ್ಸಿಗಳಿಂದ ಹೊರಗುತ್ತಿಗೆ ಸಿಬ್ಬಂದಿಗಳನ್ನು ನೇಮಿಸಿಕೊಂಡಲ್ಲಿ, "ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಪಂಚಾಯತ್ ರಾಜ್ ಸಂಸ್ಥೆಗಳು" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 71 ಎಲ್‌ಡಬ್ಲ್ಯೂಎ 2015, ದಿನಾಂಕ: 05-08-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
3. ಒಳಚರಂಡಿ, ಸ್ನಾನಗೃಹ ಮತ್ತು ಶೌಚಾಲಯಗಳನ್ನು ಸ್ವಚ್ಛಗೊಳಿಸುವ ಹಾಗೂ ಅದೇ ರೀತಿಯ ಕೆಲಸಗಳಲ್ಲಿ ನಿರತರಾಗಿರುವ ಕಾರ್ಮಿಕರುಗಳಿಗೆ "ಖಾಸಗಿ ಸಫಾಯಿ ಕರ್ಮಚಾರಿ" ಅನುಸೂಚಿತ ಉದ್ದಿಮೆಗೆ ನಿಗಧಿಪಡಿಸಿರುವ ಕನಿಷ್ಠ ವೇತನವನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 82 ಎಲ್‌ಡಬ್ಲ್ಯೂಎ 2015, ದಿನಾಂಕ: 04-08-2016ರಲ್ಲಿ ತಿಳಿಸಿರುವ ಕನಿಷ್ಠ ವೇತನ ದರಗಳನ್ನು ಪಾವತಿಸತಕ್ಕದ್ದು.
4. ಕಾರ್ಮಿಕರ ಕೆಲಸದ ಸ್ವರೂಪದ ಬಗ್ಗೆ ಸ್ಪಷ್ಟತೆ ಇರದಿದ್ದಲ್ಲಿ, ಈ ಬಗ್ಗೆ ಸ್ಪಷ್ಟವಾಗಿ ನಿರ್ಣಯಕ್ಕೆ ಬರಲು ಇಲಾಖೆಗಳ/ಅಧೀನ ಸಂಸ್ಥೆಗಳ ಸಕ್ಷಮ ಅಧಿಕಾರಿಗಳ ಸಮಿತಿಯೊಂದನ್ನು ರಚಿಸಿ ಯಾವ ಸ್ವರೂಪದ ಕೆಲಸಗಳು ಅಧಿಸೂಚನೆಯಲ್ಲಿ ನಮೂದಾಗಿರುವ ಕೆಲಸದ ಸ್ವರೂಪಗಳಿಗೆ ಸಮಾನವಾಗಿವೆ ಎಂಬುದನ್ನು ಅಧ್ಯಯನ ಮಾಡಿ, ನಿರ್ಣಯಕ್ಕೆ ಬಂದು ಆಯಾ ಸ್ವರೂಪದ ಕೆಲಸಗಳಿಗೆ ವೇತನ ಅನ್ವಯಿಸಿಕೊಳ್ಳಬಹುದಾಗಿರುತ್ತದೆ.
5. ಹೊರಗುತ್ತಿಗೆ/ಗುತ್ತಿಗೆಯ ಆಧಾರದ ಮೇಲೆ ನೌಕರರನ್ನು ನೇಮಿಸಿಕೊಳ್ಳುವ ಸಂದರ್ಭದಲ್ಲಿ ಸರ್ಕಾರವು ಒಬ್ಬ ಆದರ್ಶ ಉದ್ಯೋಗದಾತನಾಗಿರಬೇಕು.
6. ಕಾಲ ಕಾಲಕ್ಕೆ ಯಾವುದೇ ನವೀಕರಿಸಿದ ವ್ಯತ್ಯಸ್ಥ ತುಟ್ಟಿಭತ್ಯೆ ದರಗಳು ವಾಸ್ತವವಾಗಿ ಕನಿಷ್ಠವೆಂದು ಪರಿಗಣಿಸಬಹುದಾದ ದರಗಳಲ್ಲಿರಬೇಕು.
7. ಕನಿಷ್ಠ ದರಗಳು, ತಳಮಟ್ಟದ ದರಗಳಾಗಿರಬೇಕು. ಕನಿಷ್ಠ ದರಕ್ಕಿಂತಲೂ ಹೆಚ್ಚಿನ ದರಗಳಲ್ಲಿ ನಿಗಧಿಪಡಿಸುವಲ್ಲಿ ಇಲಾಖೆಯು ಸ್ವತಂತ್ರವಾಗಿರುತ್ತಿದ್ದು, ನಿಯಮಿತ ಉದ್ಯೋಗಿಗಳಿಗಾಗಿ ಒಂದೇ ರೀತಿಯ ಕೆಲಸಕ್ಕಾಗಿರುವ ಕನಿಷ್ಠ ದರಗಳಿಗೆ ಹತ್ತಿರವಾಗಿ ನಿರ್ಧರಿಸುವಂತಿರಬೇಕು.
8. ವಿರಾಮವು ಒಳಗೊಂಡಂತೆ ಒಂದು ದಿನಕ್ಕೆ ಎಂಟು ಘಂಟೆಗಳ ಕೆಲಸಕ್ಕಾಗಿ ಕನಿಷ್ಠ ವೇತನವಿದ್ದು, ಎಂಟು ತಾಸಿಗಿಂತಲೂ ಹೆಚ್ಚಿನ ಕೆಲಸಕ್ಕಾಗಿ ಹೆಚ್ಚುವರಿ ಭತ್ಯೆಯನ್ನು ಘಂಟೆಯು ಹೆಚ್ಚಾದಂತೆ ದ್ವಿಗುಣ ದರದಲ್ಲಿ ನೀಡುವುದು. ಒಂದು ದಿನದಲ್ಲಿ ಕಡಿಮೆ ತಾಸು ಕೆಲಸ ನಿರ್ವಹಿಸಿದ್ದಕ್ಕಾಗಿ ಸರಾಸರಿ ಮೊತ್ತವನ್ನು ಕಡಿತಗೊಳಿಸುವುದು.
9. ಮಾಹೆಯಾನ 4 ದಿವಸಗಳಿಗೆ ಪಾವತಿಸಿದ ರಜಾ ದಿವಸಗಳನ್ನು ಸೇರಿಸಿ ದಿನಗೂಲಿ ದರವನ್ನು ಲೆಖ್ಖ ಹಾಕುವುದು.

   ತಿಂಗಳ ವೇತನ = ದಿನದ ವೇತನ = ಘಂಟೆಯ ವೇತನ
   26 ದಿನಗಳು — 8 ತಾಸು

10. ಒಂದು ತಿಂಗಳಿನ ನಾಲ್ಕು ರಜಾ ದಿವಸಗಳಲ್ಲಿ ಕಾರ್ಮಿಕನು ಕೆಲಸ ಮಾಡಲು ಇಚ್ಛಿಸಿದಲ್ಲಿ ದ್ವಿಗುಣ ದಿನಭತ್ಯೆ ದರವನ್ನು ಹೆಚ್ಚಿನ ಭತ್ಯೆಯನ್ನಾಗಿ ಪ್ರತಿ ದಿನಕ್ಕೆ ಅವನು/ಅವಳು ಪಡೆಯುತ್ತಾರೆ.

11. ವಾಸ್ತವವಾಗಿ ಕೆಲಸ ನಿರ್ವಹಿಸಲಾದ ದಿವಸಗಳಿಗೆ ದಿನಭತ್ಯೆಯನ್ನು ಲೆಖ್ಖಿ ಹಾಕಿ ತಿಂಗಳ ಭತ್ಯೆಯನ್ನು ಪಾವತಿಸಬೇಕು.

12. ನೌಕರರ ಭಾಗದ ಇ.ಎಸ್.ಐ./ಪಿ.ಎಫ್. ವಂತಿಗೆ ಹಣವನ್ನು ಖಟಾಯಿಸಿದ ನಂತರ ನೌಕರರಿಗೆ ವೇತನವನ್ನು ಉದ್ಯೋಗದಾತರು ನೇರವಾಗಿ ನೌಕರರ ಬ್ಯಾಂಕ್ ಖಾತೆಗೆ ವರ್ಗಾಯಿಸುವ ಮೂಲಕ ಪಾವತಿಸತಕ್ಕದ್ದು.

13. ಮಾಲೀಕರ ಭಾಗದ ಇ.ಎಸ್.ಐ./ಪಿ.ಎಫ್. ವಂತಿಗೆ ಹಣವನ್ನು ನೌಕರರ ಭಾಗದ ಇ.ಎಸ್.ಐ/ ಪಿ.ಎಫ್ ವಂತಿಗೆಗೆ ಸೇರಿಸಿ, ಮಾಲೀಕರು ನೌಕರರ ಇ.ಎಸ್.ಐ / ಪಿ.ಎಫ್ ಖಾತೆಗೆ ಜಮಾ ಮಾಡತಕ್ಕದ್ದು.

14. ಮಾನವ ಸಂಪನ್ಮೂಲ ಪೂರೈಸುವ ಗುತ್ತಿಗೆದಾರ ಸಂಸ್ಥೆಗಳ ಮೇಲೆ ಮೂಲ ಗುತ್ತಿಗೆದಾರರು ಈ ಕೆಳಕಂಡ ಅಂಶಗಳ ಬಗ್ಗೆ ನಿಗಾ ವಹಿಸತಕ್ಕದ್ದು:-

ಅ) ಮೇಲಿನ ನಿಯಮಗಳಂತೆ, ವೇತನವನ್ನು ಪಾವತಿಸತಕ್ಕದ್ದು.
ಆ) ಪ್ರತಿ ತಿಂಗಳು 5ನೇ ದಿನಾಂಕದೊಳಗೆ ನೌಕರರ ಬ್ಯಾಂಕ್ ಖಾತೆಗೆ ವೇತನದ ಹಣವನ್ನು ಜಮಾ ಮಾಡತಕ್ಕದ್ದು.
ಇ) ಕ್ರಮಬದ್ಧವಲ್ಲದ ಯಾವುದೇ ಕಟಾವಣೆಗಳನ್ನು ಮಾಡಕೂಡದು.
ಈ) ನೌಕರರ ಇ.ಎಸ್.ಐ /ಪಿ.ಎಫ್ ನೋಂದಾಯಿಸಿದ ನೋಂದಾವಣೆ ಸಂಖ್ಯೆಗಳಿಗೆ ಅನುಗುಣವಾಗಿ ಇ.ಎಸ್.ಐ / ಪಿ.ಎಫ್ ವಂತಿಗೆ ಹಣವನ್ನು ಗುತ್ತಿಗೆದಾರ ಕಟಾಯಿಸಿ, ನಿರ್ವಹಿಸಿರುವ ದಾಖಲೆ ಪ್ರಸ್ತುತ ಅವಧಿಗಳಿಗೆ ಸಂಬಂಧಿಸಿರುವುದೆ ಎಂಬುದನ್ನು ಖಚಿತಪಡಿಸಿಕೊಳ್ಳಬೇಕು.

15. ನೌಕರರ ಹಾಜರಾತಿಯನ್ನು ಆಧಾರ ಸಂಖ್ಯೆಗೆ ಜೋಡಣೆಯಾಗಿರುವ ಬಯೋಮೆಟ್ರಿಕ್ ಹಾಜರಾತಿ ವ್ಯವಸ್ಥೆ (AEBAS)ಯ ಮುಖಾಂತರ ನಿರ್ವಹಿಸತಕ್ಕದ್ದು ಹಾಗೂ (AEBAS) ವ್ಯವಸ್ಥೆಯ ಮೂಲಕ ಹಾಜರಾತಿಯನ್ನು ನಿರ್ವಹಿಸಲಾಗದ ಕ್ಷೇತ್ರಗಳಲ್ಲಿ ಕೆಲಸ ನಿರ್ವಹಿಸುವ ನೌಕರರ ಹಾಜರಾತಿಯನ್ನು ಸೂಕ್ತ ವ್ಯವಸ್ಥೆಯ ಮೂಲಕ ನಿರ್ವಹಿಸತಕ್ಕದ್ದು.

16. ಯಾವುದೇ ಪ್ರದೇಶ ಅಥವಾ ಸಂಸ್ಥೆಯಲ್ಲಿ ಕೆಲಸ ನಿರ್ವಹಿಸುತ್ತಿರುವ ಕಾರ್ಮಿಕರು ಕನಿಷ್ಠ ವೇತನ ದರಗಳಿಗಿಂತ ಹೆಚ್ಚಿನ ವೇತನವನ್ನು ಪಡೆಯುತ್ತಿದ್ದಲ್ಲಿ, ಸದರಿ ಹೆಚ್ಚಿನ ವೇತನವನ್ನು ಪಡೆಯಲು ಕಾರ್ಮಿಕರು ಅರ್ಹರಾಗಿದ್ದು, ಅದನ್ನು ಪಾವತಿಸಲು ಉದ್ಯೋಗದಾತರು ಬಾಧ್ಯಸ್ಥರಾಗಿರುತ್ತಾರೆ.

17. ಕನಿಷ್ಠ ವೇತನ ದರಗಳು ಶಾಸನಬದ್ಧ ಪರಿಮಿತಿಯಾಗಿರುವುದರಿಂದ, ಕನಿಷ್ಠ ವೇತನ ದರಗಳನ್ನು ನಮೂದಿಸದೆ ಟೆಂಡರ್ ದಾಖಲೆಯಲ್ಲಿ ಕೇವಲ "ಸೇವಾ ಶುಲ್ಕವನ್ನು" ಮಾತ್ರ ನಮೂದಿಸುವ ಅವಕಾಶವನ್ನು ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳಿಗೆ ಕಲ್ಪಿಸುವ ಷರತ್ತಿನೊಂದಿಗೆ ಟೆಂಡರ್‌ನ್ನು ಪ್ರಕಟಿಸತಕ್ಕದ್ದು. ಟೆಂಡರ್‌ನಲ್ಲಿ ಭಾಗವಹಿಸುವ ಎಲ್ಲಾ ಮಾನವ ಸಂಪನ್ಮೂಲ ಪೂರೈಕೆ ಸಂಸ್ಥೆಗಳ ಪೂರ್ವಾಪರಗಳನ್ನು ಪರಿಶೀಲಿಸಿ, (ಅ) ಸದರಿ ಸಂಸ್ಥೆಗಳು ಈ ಹಿಂದೆ ನೌಕರರ ಇ.ಎಸ್.ಐ ಮತ್ತು ಪಿ.ಎಫ್ ವಂತಿಗೆಯನ್ನು ಸರಿಯಾಗಿ ಪಾವತಿಸಿರುವ ಕುರಿತು ಹಿಂದಿನ ಕೆಲವು ವರ್ಷಗಳ ದಾಖಲೆಗಳನ್ನು ಪರಿಶೀಲಿಸಬೇಕು. (ಆ) ಇತರೆ ಅನ್ವಯವಾಗುವ ಕಾರ್ಮಿಕ ಕಾನೂನುಗಳನ್ನು ಪಾಲಿಸಿವೆಯೇ ಎಂಬುದನ್ನು ಪರಿಶೀಲಿಸಿ ಖಚಿತ ಪಡಿಸಿಕೊಳ್ಳಬೇಕು. (ಇ)

ಸದರಿ ಗುತ್ತಿಗೆದಾರರು ಈ ಹಿಂದೆ ಯಾವುದೇ ಸಕ್ಷಮ ನ್ಯಾಯಾಲಯದಿಂದ ಕಾರ್ಮಿಕ ಕಾನೂನಿನ ಉಲ್ಲಂಘನೆಗಾಗಿ ದಂಡನೆಗೊಳಗಾಗಿಲ್ಲದಿರುವ ಬಗ್ಗೆ ಖಚಿತ ಪಡಿಸಿಕೊಳ್ಳಬೇಕು. ಟೆಂಡರ್ ದಾಖಲೆಗಳಲ್ಲಿ ಮೇಲ್ಕಂಡ ಎಲ್ಲಾ ಅಂಶಗಳನ್ನು ಕಡ್ಡಾಯವಾಗಿ ಅಳವಡಿಸಿಕೊಂಡು ಟೆಂಡರ್ ದಾಖಲೆಯನ್ನು ಪ್ರಕಟಿಸತಕ್ಕದ್ದು.

(ಅಮ್ಲನ್ ಆದಿತ್ಯ ಬಿಸ್ವಾಸ್)
ಸರ್ಕಾರದ ಕಾರ್ಯದರ್ಶಿಗಳು,
ಕಾರ್ಮಿಕ ಇಲಾಖೆ.

ಇವರಿಗೆ,

ಸಂಕಲನಕಾರರು, ಸರ್ಕಾರಿ ಮುದ್ರಣಾಲಯ, ಬೆಂಗಳೂರು ಇವರಿಗೆ ಈ ಸುತ್ತೋಲೆಯನ್ನು ವಿಶೇಷ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ಸದರಿ ಪ್ರಕಟಣೆಯ 200 ಪ್ರತಿಗಳನ್ನು ಸರ್ಕಾರದ ಕಾರ್ಯದರ್ಶಿಗಳು, ಕಾರ್ಮಿಕ ಇಲಾಖೆ, 4ನೇ ಮಹಡಿ, ವಿಕಾಸಸೌಧ, ಬೆಂಗಳೂರು-1 ಇವರಿಗೆ, ಕಳುಹಿಸುವಂತೆ ಕೋರಲಾಗಿದೆ.

ಪ್ರತಿಗಳು:-

1. ಸರ್ಕಾರದ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಮಹಾಲೇಖಪಾಲರು, ಲೆಕ್ಕಪತ್ರ/ಲೆಕ್ಕ ಪರಿಶೋಧನೆ, ಕರ್ನಾಟಕ, ಬೆಂಗಳೂರು.
3. ಸರ್ಕಾರದ ಎಲ್ಲಾ ಇಲಾಖೆಗಳ ಕಾರ್ಯದರ್ಶಿಗಳು/ಪ್ರಧಾನ ಕಾರ್ಯದರ್ಶಿಗಳು/ಅಪರ ಮುಖ್ಯ ಕಾರ್ಯದರ್ಶಿ ರವರಿಗೆ
4. ಕಾರ್ಮಿಕ ಆಯುಕ್ತರು, ಕಾರ್ಮಿಕ ಭವನ, ಬನ್ನೇರುಘಟ್ಟ ರಸ್ತೆ, ಬೆಂಗಳೂರು.
5. ಎಲ್ಲಾ ಜಿಲ್ಲೆಯ ಜಿಲ್ಲಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
6. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, (ಕಾರ್ಮಿಕ ಆಯುಕ್ತರ ಮೂಲಕ)
7. ಎಲ್ಲಾ ಜಿಲ್ಲೆಗಳ ವಿಭಾಗಾಧಿಕಾರಿಗಳು (ಕಾರ್ಮಿಕ ಆಯುಕ್ತರ ಮೂಲಕ)
8. ಮಾನ್ಯ ಕಾರ್ಮಿಕ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
10. ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಶಾಖೆ, ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಶಾಖೆ, ವಿಕಾಸ ಸೌಧ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.